**All India Radio: Bangalore**
**Regional Bulletin In Kannada**
**20.07.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

೧. ಧರ್ಮಸ್ಥಳ ಪ್ರಕರಣ; ವಿಶೇಷ ತನಿಖಾ ತಂಡ ರಚಿಸಿದ ರಾಜ್ಯ ಸರ್ಕಾರ

೨. ತಾಂತ್ರಿಕ ಸಮಿತಿ ವರದಿ ಆಧಾರದಲ್ಲಿ ರಾಜ್ಯದ ಅಣೆಕಟ್ಟೆಗಳಲ್ಲಿ ಅಗತ್ಯ ಕಾಮಗಾರಿ - ಉಪಮುಖ್ಯಮಂತ್ರಿ

೩. ರಾಜ್ಯಾದ್ಯಂತ ಒಂದು ಕೋಟಿ ೧೧ ಲಕ್ಷ ೧೧ ಸಾವಿರ ಸ್ವತ್ತುಗಳಿಗೆ ಇ-ಸ್ವತ್ತು ವಿತರಣೆ

೪. ಧಾರವಾಡದಲ್ಲಿ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮಕ್ಕೆ ಚಾಲನೆ

**><><><><><><><><><><**

ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳದಲ್ಲಿ ನಡೆದಿದೆ ಎನ್ನಲಾದ ಹತ್ಯೆಗಳ ತನಿಖೆಗಾಗಿ ನಾಲ್ವರು ಹಿರಿಯ ಐಪಿಎಸ್ ಅಧಿಕಾರಿಗಳನ್ನು ಒಳಗೊಂಡ ವಿಶೇಷ ತನಿಖಾ ತಂಡವನ್ನು ರಾಜ್ಯ ಸರ್ಕಾರ ರಚಿಸಿದೆ ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ರಾಜ್ಯದ ಆಂತರಿಕ ಭದ್ರತಾ ವಿಭಾಗದ ಪೊಲೀಸ್ ಮಹಾ ನಿರ್ದೇಶಕರಾದ ಪ್ರಣವ್ ಮೊಹಂತಿ ಅವರ ನೇತೃತ್ವದ ತಂಡದಲ್ಲಿ ನೇಮಕಾತಿ ವಿಭಾಗದ ಉಪ ಪೊಲೀಸ್ ಮಹಾ ನಿರೀಕ್ಷಕ ಎಂ.ಎಂ.ಅನುಚೇತ್, ಸಿಎಆರ್ ಕೇಂದ್ರದ ಉಪ ಪೊಲೀಸ್ ಆಯುಕ್ತರಾದ ಸೌಮ್ಯಲತಾ ಮತ್ತು ಆಂತರಿಕ ಭದ್ರತಾ ವಿಭಾಗದ ಪೊಲೀಸ್ ಅಧೀಕ್ಷಕ ಜಿತೇಂದ್ರ ಕುಮಾರ್ ಇದ್ದಾರೆ. ನಿವೃತ್ತ ಸುಪ್ರೀಂಕೋರ್ಟ್ ನ್ಯಾಯಮೂರ್ತಿ ವಿ.ಗೋಪಾಲ್ ಗೌಡ ಹಾಗೂ ಅನೇಕ ಸಾಮಾಜಿಕ ಹೋರಾಟಗಾರರು ಎಸ್ಐಟಿ ತನಿಖೆಗೆ ಒತ್ತಾಯಿಸಿದ್ದರು. ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರ ನಿರ್ದೇಶನದ ಮೇರೆಗೆ ರಾಜ್ಯ ಸರ್ಕಾರದ ಅಧೀನ ಕಾರ್ಯದರ್ಶಿ ಎಸ್.ಅಂಬಿಕಾ ಈ ಆದೇಶ ಹೊರಡಿಸಿದ್ದಾರೆ.

**><><><><><><><><><><**

ರಾಜ್ಯದ ಅಣೆಕಟ್ಟೆಗಳ ಸುರಕ್ಷತೆ ಕುರಿತು ಸರ್ಕಾರ ತಾಂತ್ರಿಕ ಸಮಿತಿ ರಚಿಸಿದ್ದು, ಈ ಸಮಿತಿ ವರದಿ ಬಂದ ನಂತರ ಅಗತ್ಯ ಕಾಮಗಾರಿಗಳನ್ನು ಆದ್ಯತೆ ಮೇರೆಗೆ ಕೈಗೆತ್ತಿಕೊಳ್ಳಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಕಬಿನಿ ಜಲಾಶಯದ ಬಳಿ

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತುಂಗಭದ್ರಾ ಅಣೆಕಟ್ಟು ಗೇಟ್ ದುರಸ್ತಿಯಾದ ಬಳಿಕ ರಾಜ್ಯದ ಎಲ್ಲಾ ಅಣೆಕಟ್ಟೆಗಳ ಸುರಕ್ಷತೆ ವಿಚಾರದಲ್ಲಿ ತಾಂತ್ರಿಕ ಸಮಿತಿ ರಚಿಸಲಾಗಿದೆ. ಈ ವರದಿ ಬಂದ ಬಳಿಕ ಮುಂದಿನ ಕ್ರಮ ಕೈಗೊಳ್ಳುತ್ತೇವೆ ಎಂದರು. ಮಹದೇಶ್ವರ ಬೆಟ್ಟದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಸುಮಾರು ೩೫ ಕೋಟಿ ರೂಪಾಯಿ ಮೊತ್ತದ ಅಭಿವೃದ್ಧಿ ಕಾಮಗಾರಿಗಳಿಗೆ ಅನುಮೋದನೆ ನೀಡಿದ್ದೇವೆ. ಈ ಭಾಗದಲ್ಲಿ ೮೮ ಕೋಟಿ ರೂಪಾಯಿ ಮೊತ್ತದ ಹನಿ ನೀರಾವರಿ ಯೋಜನೆಗೆ ಡಿಪಿಆರ್ ಸಿದ್ಧಗೊಳಿಸಿ ಪ್ರಸ್ತಾವನೆ ಸಲ್ಲಿಸಿದ್ದೇವೆ ಎಂದು ಹೇಳಿದರು. ಕಬಿನಿ ಉತ್ಸವ ಮಾಡುವ ಬಗ್ಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಬಗ್ಗೆ ಜಿಲ್ಲಾ ಸಚಿವರೊಂದಿಗೆ ಚರ್ಚಿಸಲಾಗುವುದು. ಕಬಿನಿ ಉತ್ಸವ, ಕಾವೇರಿ ಆರತಿ ಮಾಡುವ ನಿಟ್ಟಿನಲ್ಲಿ ಚರ್ಚೆ ನಡೆಯುತ್ತಿದೆ. ಈ ಕಾರ್ಯಕ್ರಮಗಳ ಮೂಲಕ ಪ್ರವಾಸೋದ್ಯಮ ಆಕರ್ಷಣೆ ಹಾಗೂ ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡಲು ಸರ್ಕಾರ ಸಂಕಲ್ಪ ಮಾಡಿದೆ ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

><><><><><><><><><><><

ಶಿವಮೊಗ್ಗ ಜಿಲ್ಲೆಯ ಹೊಳೆಹೊನ್ನೂರಿನಲ್ಲಿ ಕೇಂದ್ರ ಹಣಕಾಸು ಸೇವೆಗಳ ವತಿಯಿಂದ ಹಣಕಾಸು ಸೇರ್ಪಡೆ ಪರಿಪೂರ್ಣತಾ ಅಭಿಯಾನ ನಡೆಯಿತು. ಸಾಮಾಜಿಕ ಭದ್ರತಾ ಯೋಜನೆಯಡಿಯಲ್ಲಿ ಸರ್ಕಾರದ ಪಿಎಂ ಜೆಜೆಬಿವೈ, ಪಿಎಂಎಸ್‌ಬಿವೈಎಪಿವೈ ಸೇರಿದಂತೆ ಹಲವು ಯೋಜನೆಗಳ ಬಗ್ಗೆ ಅಧಿಕಾರಿಗಳು ಮಾಹಿತಿ ನೀಡಿದರು.

ಧ್ವನಿ - ಇಂದಿರಾ ಹೆಚ್.ಆರ್. (ನಿವಾಸಿ) (೩೬ ಸೆಕೆಂಡುಗಳು)

ಬೆಳಗಾವಿಯಲ್ಲಿ ಜನಸುರಕ್ಷಾ ಪರಿಪೂರ್ಣತಾ ಅಭಿಯಾನದ ಪರಿಶೀಲನೆಗಾಗಿ ಸಭೆ ನಡೆಸಲಾಯಿತು. ಎಲ್ಲಾ ಬಾಕಿ ಅರ್ಜಿಗಳನ್ನು ಪ್ರಸಕ್ತ ಮಾರ್ಗಸೂಚಿಗಳಂತೆ ತಕ್ಷಣವೇ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಆಡಳಿತಾಧಿಕಾರಿ ಪರಶುರಾಮ ದುಡಗುಂಟಿ ಸೂಚಿಸಿದರು. ಸಭೆಯಲ್ಲಿ ಜನಸುರಕ್ಷಾ ಅಭಿಯಾನದ ಪ್ರಗತಿ, ಎಸಿಪಿ-ಸಿಡಿ ಅನುಪಾತ, ವಿವಿಧ ಸರ್ಕಾರಿ ಯೋಜನೆಗಳ ಬಾಕಿ, ಹಣಕಾಸು ಸಾಕ್ಷರತಾ ಶಿಬಿರಗಳು, ಸಾಮಾಜಿಕ ಭದ್ರತಾ ಯೋಜನೆಗಳು, She ಃox ಪೋರ್ಟಲ್, ಪಿಎಂ ಸೂರ್ಯಘರ್ ಯೋಜನೆ ಇತ್ಯಾದಿಗಳನ್ನು ಪರಿಶೀಲಿಸಲಾಯಿತು.

><><><><><><><><><><><

ಇ-ಸ್ವತ್ತು ದಾಖಲೀಕರಣಕ್ಕೆ ರಾಜ್ಯ ಸರ್ಕಾರ ಒತ್ತು ನೀಡಿದ್ದು, ರಾಜ್ಯಾದ್ಯಂತ ೧ ಕೋಟಿ ೧೧ ಲಕ್ಷ ೧೧ ಸಾವಿರ ಸ್ವತ್ತುಗಳಿಗೆ ಇ-ಸ್ವತ್ತು ನೀಡಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆಯಲ್ಲಿ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಇ-ಸ್ವತ್ತು ಮತ್ತು ಹಕ್ಕು ಪತ್ರ ಹಾಗೂ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಸೌಲಭ್ಯಗಳ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು. ರೈತರ ಕೃಷಿ ಭೂಮಿಗಳಿಗೆ ೧೯ ಸಾವಿರ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಪ್ರತಿ ನಿತ್ಯ ೭ ಗಂಟೆ ಕಾಲ ೧೦ ಹೆಚ್.ಪಿ ವರೆಗೆ ವಿದ್ಯುತ್ ನೀಡಲಾಗುತ್ತಿದೆ ಎಂದು ತಿಳಿಸಿದರು. ಹೊಸಕೋಟೆಯಲ್ಲಿ ೬ ಸಾವಿರ ಇ-ಸ್ವತ್ತು ನೀಡಲಾಗುತ್ತಿದೆ. ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಬಿ ಖಾತೆಯಿಂದ ಎ ಖಾತೆಗೆ ಆಸ್ತಿ ವರ್ಗ ಮಾಡಲು ಸಿದ್ಧತೆ ನಡೆಸಲಾಗುತ್ತಿದೆ. ಬೆಂಗಳೂರು ನಗರಕ್ಕೆ ಹೊಂದಿಕೊಂಡಿರುವ ಹೊಸಕೋಟೆಗೆ ಶೀಘ್ರ ಮೆಟ್ರೋ ಸಂಪರ್ಕ ಕಲ್ಪಿಸಲು ಅಗತ್ಯ ಯೋಜನೆ ಸಿದ್ಧಪಡಿಸಲಾಗುವುದು ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

><><><><><><><><><><><

ಸಾರ್ವಜನಿಕರ ಸುರಕ್ಷತೆಗಾಗಿ ವಿನೂತನ ಕ್ರಮವಾಗಿ ಪೊಲೀಸ್ ಇಲಾಖೆಯಿಂದ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮವನ್ನು ಜಾರಿ ಮಾಡಲಾಗಿದೆ ಎಂದು ಧಾರವಾಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಹೇಳಿದ್ದಾರೆ. ಧಾರಾವಾಡ ತಾಲೂಕಿನ ಹೆಬ್ಬಳ್ಳಿ ಗ್ರಾಮದಲ್ಲಿ ಮನೆ ಮನೆಗೆ ಭೇಟಿ ನೀಡಿ, ಜನರ ಅಹವಾಲು ಆಲಿಸಿದರು. ಗ್ರಾಮಸ್ಥರನ್ನು ಉದ್ದೇಶಿಸಿ ಮಾತನಾಡಿದ ಅವರು, ಕರ್ನಾಟಕ ಪೊಲೀಸ್ ಜನಸ್ನೇಹಿ ಪೊಲೀಸ್ ಆಗಿದ್ದು, ಸಮುದಾಯ ವ್ಯವಸ್ಥೆಯನ್ನು ಬಲಪಡಿಸಿ, ಸಮಾಜದ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಉದ್ದೇಶದಿಂದ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮ ಜಾರಿ ಮಾಡಲಾಗಿದೆ ಎಂದರು. ಪೊಲೀಸ್ ಮತ್ತು ಸಾರ್ವಜನಿಕರ ನಡುವಿನ ಅಂತರವನ್ನು ಕಡಿಮೆ ಮಾಡಿ, ವಿಶ್ವಾಸದ ಸಂಬಂಧವನ್ನು ಬೆಳೆಸುವುದು ಮತ್ತು ಅಪರಾಧಗಳನ್ನು ತಡೆಗಟಲು ಇದು ವಿನೂತನ ಕ್ರಮವಾಗಿದೆ ಎಂದು ಗುಂಜನ್ ಆರ್ಯ ಹೇಳಿದರು.

><><><><><><><><><><><

ಕೇಂದ ಸರ್ಕಾರ ಸ್ವಾಮ್ಯದ ಮಂಗಳೂರು ರಿಫೈನರಿ ಮತ್ತು ಪೆಟ್ರೋಕೆಮಿಕಲ್ಸ್ ಲಿಮಿಟೆಡ್ ಸಂಸ್ಥೆಯು ಹಸಿರು ವಲಯ ನಿರ್ಮಾಣ ಸಂಬಂಧ ೨೭ ಎಕರೆ ಭೂಸ್ವಾಧೀನಕ್ಕೆ ಭೂಮಾಲಿಕರಿಗೆ ಸೂಕ್ತ ಪರಿಹಾರ ಒದಗಿಸಲು ನಿರ್ಧರಿಸಿದೆ. ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿಯಲ್ಲಿ ಲೋಕಸಭಾ ಸದಸ್ಯ ಕ್ಯಾಪ್ಟನ್ ಬ್ರಿಜೇಶ್ ಚೌಟ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಬಗ್ಗೆ ನಿರ್ಧರಿಸಲಾಯಿತು. ಪ್ರತಿ ಎಕರೆಗೆ ೮೦ ಲಕ್ಷ ರೂಪಾಯಿ ಪರಿಹಾರ, ಉದ್ಯೋಗ ಬದಲು ಪ್ರತಿ ಕುಟುಂಬಕ್ಕೆ ೨೦ ಲಕ್ಷ ರೂಪಾಯಿ ನಗದು ಮತ್ತು ನಿವೇಶನ ಸೇರಿದಂತೆ ಪರಿಹಾರ ನೀಡಲು ಎಂಆರ್‌ಪಿಎಲ್ ಜಿಲ್ಲಾಡಳಿತಕ್ಕೆ ಪ್ರಸ್ತಾವನೆ ಸಲ್ಲಿಸಿದೆ. ಜಿಲ್ಲಾಧಿಕಾರಿ ದರ್ಶನ್

ಎಚ್.ವಿ.ಮಾತನಾಡಿ, ಎಂಆರ್‌ಪಿಎಲ್ ಸಲ್ಲಿಸಿರುವ ಪ್ಯಾಕೇಜ್ ಬಗ್ಗೆ ಶೀಘ್ರದಲ್ಲೇ ಅಂತಿಮ ನಿರ್ಧಾರಕ್ಕೆ ಬರಲಾಗುವುದು ಎಂದು ತಿಳಿಸಿದರು.

><><><><><><><><><><><

ಪ್ರಸಿದ್ಧ ಯಕ್ಷಗಾನ ಕಲಾವಿದ, ಬಣ್ಣದ ವೇಷಧಾರಿ ಸಿದ್ದಕಟ್ಟೆ ಸದಾಶಿವ ಶೆಟ್ಟಿಗಾರ್ ಇಂದು ನಿಧನರಾಗಿದ್ದಾರೆ. ಅವರಿಗೆ ೭೦ ವರ್ಷ ವಯಸ್ಸಾಗಿತ್ತು. ಬಂಟ್ವಾಳ ತಾಲೂಕಿನ ಸಂಗಬೆಟ್ಟು ಗ್ರಾಮದ ಮಂಚಕಲ್ಲು ನಿವಾಸಿಯಾದ ಸದಾಶಿವ ಶೆಟ್ಟಿಗಾರ್, ಹನುಮಗಿರಿ ಮೇಳದ ಹಿರಿಯ ಕಲಾವಿದರಾಗಿದ್ದರು. ಕಳೆದ ಮೂರು ದಶಕಗಳಿಗೂ ಅಧಿಕ ಕಾಲ ಯಕ್ಷಗಾನ ಕ್ಷೇತ್ರದಲ್ಲಿ ತನ್ನದೇ ಆದ ಹೆಗ್ಗುರುತು ಮೂಡಿಸಿದ್ದ ಅವರು, ತಮ್ಮ ಅಭಿನಯ, ಮಾತುಗಾರಿಕೆಯ ಮೂಲಕವೇ ಯಕ್ಷಪ್ರಿಯರ ಮನಗೆದ್ದಿದ್ದರು.

><><><><><><><><><><><

ಇನ್ನು ಹವಾವರ್ತಮಾನ,

ರಾಜ್ಯದಲ್ಲಿ ನೈಋತ್ಯ ಮುಂಗಾರು ಸಾಮಾನ್ಯವಾಗಿತ್ತು. ಕರಾವಳಿ ಮತ್ತು ದಕ್ಷಿಣ ಒಳನಾಡಿನ ಹೆಚ್ಚಿನ ಸ್ಥಳಗಳಲ್ಲಿ ಹಾಗೂ ಉತ್ತರ ಒಳನಾಡಿನ ಕೆಲವು ಸ್ಥಳಗಳಲ್ಲಿ ಇಂದು ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಉತ್ತರಕನ್ನಡ ಜಿಲ್ಲೆಯ ಕಾರವಾರದಲ್ಲಿ ಅತಿಹೆಚ್ಚು ೧೨ ಸೆಂಟಿ ಮೀಟರ್ ಮಳೆಯಾಗಿದೆ. ಇದೇ ವೇಳೆ ಸಿದ್ದಾಪುರ ೯, ಕೋಟಾ ೮, ಕುಂದಾಪುರ, ಕುಮಟಾ, ಅಂಕೋಲಾ, ಕದ್ರಾ ಮತ್ತು ಅಗುಂಬೆಯಲ್ಲಿ ತಲಾ ೭ ಸೆಂಟಿ ಮೀಟರ್ ಮಳೆಯಾಗಿದೆ. ಮಂಕಿ, ಉಡುಪಿ, ಮುಲ್ಕಿ ತಲಾ ೬ ಸೆಂಟಿ ಮೀಟರ್, ಕಾರ್ಕಳ, ಮೂಡಬಿದ್ರೆ, ಗೋಕರ್ಣ, ಮಂಗಳೂರು, ಶಿರಾಲಿ ಮತ್ತು ಭಾಗಮಂಡಲದಲ್ಲಿ ತಲಾ ೫ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ೩ ದಿನಗಳ ಕಾಲ ರಾಜ್ಯದ ಕೆಲವು ಸ್ಥಳಗಳಲ್ಲಿ ಮಳೆಯಾಗುವ ಸಾಧ್ಯತೆಯಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣ. ಸಾಧಾರಣ ಮಳೆಯಾಗುವ ಸಾಧ್ಯತೆ. ಗರಿಷ್ಠ ೨೮, ಕನಿಷ್ಠ ೨೦ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

><><><><><><><><><><><

ಚಿಕ್ಕಮಗಳೂರು ಜಿಲ್ಲೆಯಲ್ಲಿ ಸಾಧಾರಣ ಮಳೆ ಮುಂದುವರೆದಿದೆ. ಜಿಲ್ಲೆಯಲ್ಲಿ ಈ ತಿಂಗಳ ೨೩ ರ ವರೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಮಲೆನಾಡಿನ ಕೆಲವೆಡೆ ಗಾಳಿ ಸಹಿತ ಹೆಚ್ಚಿನ ಮಳೆಯಾಗುವ ಸಾಧ್ಯತೆ ಇರುವುದರಿಂದ ಪ್ರವಾಸಿಗರು ಮತ್ತು ಸಾರ್ವಜನಿಕರಿಗೆ ಜಿಲ್ಲಾಡಳಿತ ಎಚ್ಚರಿಕೆ ನೀಡಿದೆ.